ಪಹಲ್ಗಾಮ್ ಬಿಟ್ಟು ಬೆಳಗಾವಿಗೆ ಬಂದು ಯಾಕೆ ನಾಟಕ ಮಾಡಿದರು? ಪ್ರತಿಯೊಬ್ಬರಿಗೂ ಪ್ರತಿಭಟನೆ ಮಾಡುವ ಹಕ್ಕಿದೆ. ಸಿದ್ದರಾಮಯ್ಯ ಪಾಕ್ ಚಾನಲ್ ಹಿರೋ ಆಗಿದ್ದಾರೆ
● **ಅಭಯ ಪಾಟೀಲ** ಶಾಸಕ

ಕಪ್ಪು ಬಟ್ಟೆ ಪ್ರದರ್ಶನ, ಸಮಾವೇಶದಲ್ಲಿ ಹೈಡ್ರಾಮಾ

ಮುಖ್ಯಮಂತ್ರಿ ಭಾಷಣದ ಮಧ್ಯೆಯೇ ಕಪ್ಪು ಬಾವುಟ ಪ್ರದರ್ಶಿಸಿದ ಬಿಜೆಪಿ ಕಾರ್ಯಕರ್ತೆಯರು

● **ಕನ್ನಡಪ್ರಭ ವಾರ್ತೆ** ಬೆಳಗಾವಿ

ಇಲ್ಲಿನ ಸಿಪಿಇಡಿ ಮೈದಾನದಲ್ಲಿ ಕಾಂಗ್ರೆಸ್ ಆಯೋಜಿಸಿದ್ದ ಸಂವಿಧಾನ ರಕ್ಷಿಸಿ, ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರೋಧಿಸಿ ಕಾಂಗ್ರೆಸ್‌ನ ಪ್ರತಿಭಟನಾ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಷಣ ಮಾಡುತ್ತಿದ್ದ ವೇಳೆ ಬಿಜೆಪಿ ಮಹಿಳಾ ಕಾರ್ಯಕರ್ತೆಯರು ಕಪ್ಪು ಬಾವುಟ ಪ್ರದರ್ಶನ ಮಾಡಿ, ಸಿಎಂ ವಿರುದ್ಧ ಘೋಷಣೆ ಕೂಗಿದ ಘಟನೆ ನಡೆಯಿತು. ಈ ವೇಳೆ ಗೊಂದಲ ಸೃಷ್ಟಿಯಾಗಿ, ಹೈಡ್ರಾಮಾ ಕೂಡ ಜರುಗಿತು.

ಕಾಂಗ್ರೆಸ್ ಕಾರ್ಯಕರ್ತರ ಜೊತೆಗೆ ಸಮಾವೇಶಕ್ಕೆ ಆಗಮಿಸಿದ್ದ ಬಿಜೆಪಿ ಕಾರ್ಯಕರ್ತೆಯರು ತಮ್ಮನ್ನು ಯಾರೂ ಗುರುತಿಸದಂತೆ ತಮ್ಮ ಮುಖಕ್ಕೆ ಬಟ್ಟೆ ಕಟ್ಟಿಕೊಂಡು ಬಂದಿದ್ದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೆವಾಲಾ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ ಸೇರಿದಂತೆ ಕಾಂಗ್ರೆಸ್ ನಾಯಕರು ಸಮಾವೇಶವನ್ನುದ್ದೇಶಿಸಿ ಮಾತನಾಡುವವರೆಗೂ ಸುಮ್ಮನಿದ್ದ ಬಿಜೆಪಿ ಕಾರ್ಯಕರ್ತೆಯರು, ಸಿಎಂ ಸಿದ್ದರಾಮಯ್ಯ ಭಾಷಣ ಮಾಡುತ್ತಿದ್ದಾಗಲೇ ತಮ್ಮ ಮುಖಕ್ಕೆಕಟ್ಟಿಕೊಂಡಿದ್ದ ಬಟ್ಟೆಯನ್ನು ಬಿಚ್ಚಿದರು.ನಂತರ ಬಿಜೆಪಿ ಕಾರ್ಯಕರ್ತೆ ಶಿಲ್ಪಾ ಕೇಕರೆ ಕಪ್ಪು ಬಟ್ಟೆ ಪ್ರದರ್ಶಿಸಿದರು. ಸಿಎಂ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಇದರಿಂದಾಗಿ ಸಮಾವೇಶದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು. ಬಳಿಕ ಪೊಲೀಸರು ಶಿಲ್ಪಾ ಸೇರಿ ಆರು ಬಿಜೆಪಿ ಮಹಿಳಾ ಕಾರ್ಯಕರ್ತೆಯರನ್ನು ತಮ್ಮ ವಶಕ್ಕೆ ಪಡೆದುಕೊಂಡರು.ಸಿದ್ದರಾಮಯ್ಯ ಗೋ ಗೋ ಪಾಕಿಸ್ತಾನ ಎಂದು ಬಿಜೆಪಿ ಕಾರ್ಯಕರ್ತೆ ಶಿಲ್ಪಾ ಘೋಷಣೆ ಕೂಗಿದರು. ಪಹಲ್ಗಾಮ್ ಪ್ರಕರಣ ಬಗ್ಗೆ ಸಿಎಂ ಹೇಳಿಕೆ ಖಂಡಿಸಿ ತಮ್ಮ ಆಕ್ರೋಶವನ್ನು ಹೊರಹಾಕಿದರು. ನಂತರ ಶಿಲ್ಪಾ ಅವರನ್ನು ಕ್ಯಾಂಪ್ ಠಾಣೆಗೆ ಕರೆದುಕೊಂಡು ಹೋಗಲು ಪೊಲೀಸರು ತಮ್ಮ ಜೀಪಿನಲ್ಲಿ ಕೂರಿಸಿದರು. ಈ ವೇಳೆ ಕಾಂಗ್ರೆಸ್ ಕಾರ್ಯಕರ್ತರ ಪೊಲೀಸ್ ಜೀಪಿಗೆ ಮುತ್ತಿಗೆ ಹಾಕಿದರು. ಆಗ ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿ ಅವರನ್ನು ಚದುರಿಸಿ ಶಿಲ್ಪಾರನ್ನು ಕರೆದುಕೊಂಡು ಹೋದರು.

ಶಿಲ್ಪಾರನ್ನು ಅಜ್ಞಾತ ಸ್ಥಳಕ್ಕೆ ಕರೆದುಕೊಂಡು ಹೋದರು. ಸಿಎಂಗೆ ಕಪ್ಪು ಬಾವುಟ ಪ್ರದರ್ಶಿಸಿದ ಬಿಜೆಪಿ ಕಾರ್ಯಕರ್ತೆಯರ ಆರೋಗ್ಯ ತಪಾಸಣೆಗೆ ವಂಟಮೂರಿಯಲ್ಲಿರುವ ತಾಯಿ ಮತ್ತು ಮಕ್ಕಳ ಆರೋಗ್ಯ ಕೇಂದ್ರಕ್ಕೆಕರೆತರುವಮೂಲಕಪೊಲೀಸರು ಮತ್ತೊಂದು ಯಡವಟ್ಟು ಮಾಡಿಕೊಂಡರು. ಜಿಲ್ಲಾಸ್ಪತ್ರೆ ಇಲ್ಲವೇ ಪಿಎಚ್‌ಸಿಗಳಲ್ಲಿ ಆರೋಗ್ಯ ತಪಾಸಣೆ ಮಾಡಬೇಕೆಂಬ ನಿಯಮವಿತ್ತು. ಆದರೆ, ಇಲ್ಲಿನ ವೈದ್ಯರು ಆರೋಗ್ಯ ತಪಾಸಣೆಮಾಡಲು ನಿರಾಕರಿಸಿದರು. ಮರಳಿ ಅವರನ್ನು ಬಿಮ್ಸ್ ಆಸ್ಪತ್ರೆಗೆ ಕರೆದುಕೊಂಡು ಹೋಗಿ, ವೈದ್ಯಕೀಯ ತಪಾಸಣೆ ನಡೆಸಲಾಯಿತು. ಬಳಿಕ ಕೋರ್ಟ್‌ಗೆ ಹಾಜರು ಪಡಿಸಲಾಯಿತು. ಕಾರ್ಯಕರ್ತೆಯರ ಪರವಾಗಿ ವಕೀಲರಾದ ವಿನೋದಕುಮಾರ ಪಾಟೀಲ ಮತ್ತು ಧನ್ಯಕುಮಾರ ಪಾಟೀಲ ವಕಾಲತ್ತು ವಹಿಸಿದ್ದರು. ಕೋರ್ಟ್ ಮುಂದೆ ಬಿಜೆಪಿ ನಾಯಕರು, ಕಾರ್ಯಕರ್ತರು ಜಮಾಯಿಸಿದ್ದರು.

ಪೊಲೀಸರ ಈ ನಡೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಬಿಜೆಪಿ ಕಾರ್ಯಕರ್ತೆಯರು, ನಮ್ಮನ್ನು ಠಾಣೆಯಿಂದ ಠಾಣೆಗೆ ಪೊಲೀಸರು ಸುತ್ತಾಡಿಸುತ್ತಿದ್ದಾರೆ. ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿಗೆ ಮಾಡಿದಂತೆ ನಮಗೂ ಎಲ್ಲ ಕಡೆಗೂ ಪೊಲೀಸರು ಕರೆದೊಯ್ಯುತ್ತಿದ್ದಾರೆ. ಹಿಂದು ವಿರೋಧಿ ವಿರುದ್ಧ ನಮ್ಮ ಪ್ರತಿಭಟನೆ ಇತ್ತು ಅಷ್ಟೇ ಎಂದರು.

ಸಿಎಂ ಸಿದ್ದರಾಮಯ್ಯ ಪಾಕ್ ಚಾನೆಲ್ ಹಿರೋ

ಬೆಳಗಾವಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಕಿಸ್ತಾನ ಚಾನೆಲ್ ಹಿರೋ ಆಗಿದ್ದಾರೆ ಎಂದು ಶಾಸಕ ಅಭಯ ಪಾಟೀಲ ಆರೋಪಿಸಿದರು. ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಹಲ್ಗಾಮ್ ಬಿಟ್ಟು ಬೆಳಗಾವಿಗೆ ಬಂದು ಯಾಕೆ ನಾಟಕ ಮಾಡಿದರು? ಪ್ರತಿಯೊಬ್ಬರಿಗೂ ಪ್ರತಿಭಟನೆ ಮಾಡುವ ಹಕ್ಕಿದೆ. ಸಿದ್ದರಾಮಯ್ಯ ಪಾಕ್ ಚಾನಲ್ ಹಿರೋ ಆಗಿದ್ದಾರೆ ಎಂದರು.
ಹಲ್ಲೆ, ಧಮ್ಕಿ ಕೊಡುವ ಕೆಲಸವನ್ನು ಸರ್ಕಾರ ಮಾಡಿದೆ. ಎಲ್ಲಾ ಕಡೆ ಸಿಎಂ ವಿರುದ್ಧ ಪ್ರತಿಭಟನೆ ಮಾಡಿದರೆ, ಮಹಿಳೆಯನ್ನು ಠಾಣೆಯಿಂದ ಠಾಣೆಗೆ ಓಡಾಡಿಸಿದ್ದಾರೆ. ಮಹಿಳೆಯರನ್ನು ಭಯಪಡಿಸುವ ಕೆಲಸವನ್ನು ಈ ಸರ್ಕಾರ ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಡಿಸಿಪಿ ಮೇಲೆ ಸಚಿವೆ ಹೆಬ್ಬಾಳಕರ ಗರಂ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾವು ಭಾಷಣ ಮಾಡುವಾಗ ವೇದಿಕೆಯಲ್ಲೇ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಅವರಿಗೆ ಏನೋ ಸೂಚನೆ ಕೊಡುತ್ತಾರೆ. ಅದರಂತೆ ಸಚಿವೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ವೇದಿಕೆಯಿಂದ ಕೆಳಗೆ ಬಂದು, ಡಿಸಿಪಿ ರೋಹನ ಜಗದೀಶ ವಿರುದ್ಧ ಹರಿಹಾಯ್ದರು. ಏನಿದು ಸಮಾವೇಶದಲ್ಲಿ ಗೊಂದಲ ಉಂಟಾಗಿದೆ. ನಿಮಗ್ಯಾರು ಅವರನ್ನು ಬಿಡಲು ಹೇಳಿದ್ದು? ಹೀಗೆ ಗಲಾಟೆಯಾಗಲು ಯಾರು ಕಾರಣ? ಕೂಡಲೇ ಪರಿಸ್ಥಿತಿ ನಿಯಂತ್ರಿಸುವಂತೆ ಸೂಚನೆ ನೀಡುತ್ತಾರೆ. ಈ ನಡುವೆ ಬಿಜೆಪಿ ಮಹಿಳಾ ಕಾರ್ಯಕರ್ತೆಯರನ್ನು ಬಂಧಿಸುವಂತೆ ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸುತ್ತಾರೆ. ಜತೆಗೆ ಕಾಂಗ್ರೆಸ್ ಕಾರ್ಯಕರ್ತರು ಪೊಲೀಸರ ವಾಹನಗಳಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು. ಬಿಜೆಪಿ ವಿರುದ್ಧ ಘೋಷಣೆ ಕೂಗಿದರು.

ಬಿಜೆಪಿ ಕಾರ್ಯಕರ್ತೆಯರ ಮೇಲೆ ಕೇಸ್, ಜಾಮೀನು

● **ಕನ್ನಡಪ್ರಭ ವಾರ್ತೆ** ಬೆಳಗಾವಿ

ಬೆಳಗಾವಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಿದ ಬಿಜೆಪಿಯ ಆರು ಜನ ಕಾರ್ಯಕರ್ತೆಯರ ಮೇಲೆ ಬೆಳಗಾವಿ ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಿಲ್ಪಾ ಕೇಕ್ರೆ, ಪವಿತ್ರಾ ಹಿರೇಮಠ, ರೇಷ್ಮಾ ಬರಮೂಚೆ, ಮಂಜುಳಾ ಹಣ್ಣೇಕೇರಿ, ಅನ್ನಪೂರ್ಣಾ ಹವಳಸೇರಿ ಆರು ಬಿಜೆಪಿ ಮಹಿಳಾ ಕಾರ್ಯಕರ್ತೆಯರ ವಿರುದ್ಧ ಬಿಎನ್‌ಎಸ್ 189(1)(ಇ), ಬಿಎನ್‌ಎಸ್ 352 ಅಡಿ ಆರು ಬಿಜೆಪಿ ಕಾರ್ಯಕರ್ತೆಯರ ವಿರುದ್ಧ ದೂರು ದಾಖಲಾಗಿದೆ. ಕಾಂಗ್ರೆಸ್ ಪಕ್ಷದಿಂದ ಪ್ರತಿಭಟನಾ ಸಭೆ ನಡೆಯುತ್ತಿತ್ತು. ಈ ವೇಳೆ ಕಪ್ಪು ಭಾವುಟ ತೋರಿಸಿದ್ದಾರೆ. ಕೆಲ ಘೋಷಣೆ ಕೂಗಿದ್ದಾರೆ. ಇದರಿಂದ ಸಭೆಗೆ ಅಡೆತಡೆಯಾಗಿದೆ. ಜಿಲ್ಲಾ ಕಾಂಗ್ರೆಸ್ ಪಕ್ಷ ದೂರು ನೀಡಿದೆ. ಬಿಎನ್‌ಎಸ್ ಸೆಕ್ಷನ್ 189, 352 ಅಡಿ ಸಾರ್ವಜನಿಕ ಶಾಂತಿಭಂಗ ಹಾಗೂ ಪ್ರಚೋದನೆ ಕೃತ್ಯ ಆಧಾರದ ಅಡಿ ಕೇಸ್ ದಾಖಲಾಗಿದೆ ಎಂದು ಬೆಳಗಾವಿ ಉತ್ತರ ವಲಯ ಐಜಿಪಿ ಚೇತನ್ ಸಿಂಗ್ ರಾಠೋಡ್ ತಿಳಿಸಿದರು.

ಬಿಜೆಪಿ ಕಾರ್ಯಕರ್ತೆಯರಿಗೆ ಜಾಮೀನು: ಬಂಧಿತ 6 ಜನ ಬಿಜೆಪಿ ಕಾರ್ಯಕರ್ತೆಯರಿಗೆ ಬೆಳಗಾವಿಯ ಐದನೇ ಜೆಎಂಎಫ್‌ಸಿ ನ್ಯಾಯಾಲಯ ಜಾಮೀನು ಮಂಜೂರು ಮಾಡಿತು. ಬಿಜೆಪಿ ಕಾರ್ಯಕರ್ತೆಯರು ಪಕ್ಷದ ಕಚೇರಿಗೆ ಆಗಮಿಸುತ್ತಿದ್ದಂತೆ, ನಾರಿ ಶಕ್ತಿ ಜಿಂದಾಬಾದ್ ಎಂದು ಕಾರ್ಯಕರ್ತರು ಬರಮಾಡಿಕೊಂಡರು.

ಬಿಜೆಪಿ- ಕಾಂಗ್ರೆಸ್ ಹೈಡ್ರಾಮಾ

ಕಾಂಗ್ರೆಸ್ ಸಮಾವೇಶದಲ್ಲಿ ಬಿಜೆಪಿ ಕಾರ್ಯಕರ್ತೆಯರ ಗದ್ದಲ ವಿಚಾರವಾಗಿ ಬೆಳಗಾವಿ ಕ್ಯಾಂಪ್ ಪೊಲೀಸ್ ಠಾಣೆ ಎದುರು ಬಿಜೆಪಿ- ಕಾಂಗ್ರೆಸ್ ಕಾರ್ಯಕರ್ತರಿಂದ ಹೈಡ್ರಾಮಾ ನಡೆಯಿತು. ಮೋದಿ ಪರ ಬಿಜೆಪಿ ಕಾರ್ಯಕರ್ತರು, ರಾಹುಲ್ ಗಾಂಧಿ ಪರ ಕಾಂಗ್ರೆಸ್ ಕಾರ್ಯಕರ್ತರು ಘೋಷಣೆ ಕೂಗಿದರು. ಮುಖ್ಯಮಂತ್ರಿ ಗೆ ಕಪ್ಪು ಬಾವುಟ ಪ್ರದರ್ಶಿಸಿ, ಪ್ರತಿಭಟನೆ ನಡೆಸಿದ್ದ ಬಿಜೆಪಿ ಕಾರ್ಯಕರ್ತೆ ಶಿಲ್ಪಾ ಅವರನ್ನು ವಶಕ್ಕೆ ಪಡೆದು ಕ್ಯಾಂಪ್ ಠಾಣೆಗೆ ಕರೆತಂದ ಮಾಹಿತಿ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಠಾಣೆಯತ್ತ ಆಗಮಿಸಿದರು. ಕಾಂಗ್ರೆಸ್ ಸಮಾವೇಶದಲ್ಲಿ ಗೊಂದಲ ಸೃಷ್ಟಿಸಿದ ಬಿಜೆಪಿ ಕಾರ್ಯಕರ್ತೆ ಶಿಲ್ಪಾಳನ್ನು ಬಂಧಿಸುವಂತೆ ಕಾಂಗ್ರೆಸ್ ಕಾರ್ಯಕರ್ತರು ಕೂಡ ಠಾಣೆಗೆ ಬಂದು ಪ್ರತಿಭಟಿಸಿ ಆಗ್ರಹಿಸಿದರು. ಬಿಜೆಪಿ, ಕಾಂಗ್ರೆಸ್ ಕಾರ್ಯಕರ್ತರು ಪರಸ್ಪರ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಎರಡೂ ಪಕ್ಷಗಳ ಕಾರ್ಯಕರ್ತರು, ನಾಯಕರ ಮನವೊಲಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು.

ಭಾಷಣಕ್ಕೆ ಅಡ್ಡಿಪಡಿಸುವುದು ಬಿಜೆಪಿಗೆ ಶೋಭೆ ತರದು

ಬಿಜೆಪಿಯವರ ಗೊಡ್ಡು ಬೆದರಿಕೆಗೆ ಕಾಂಗ್ರೆಸ್ಸಿಗರು ಹೆದರುವುದಿಲ್ಲ. ಇಂತಹ ನೂರಾರು ಪ್ರತಿಭಟನೆ, ಬೆದರಿಕೆಗಳನ್ನು ನೋಡಿದ್ದೇವೆ. ಇಂಥ ಘಟನೆ ಬಿಜೆಪಿಯವರಿಗೆ ಶೋಭೆ ತರುವುದಿಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದರು. ನಾಡಿನ ಮುಖ್ಯಮಂತ್ರಿಗಳಿಗೆ ಬಿಜೆಪಿಗರು ಅಗೌರವ ತೋರಿದ್ದಾರೆ. ಇದು ಬಿಜೆಪಿಯವರ ಹತಾಶ ಮನೋಭಾವವನ್ನು ತೋರುತ್ತದೆ. ಬಿಜೆಪಿಯವರಿಗೆ ಧೈರ್ಯವಿದ್ದರೆ ಎದುರಿಗೆ ಬಂದು ಪ್ರತಿಭಟನೆ ಮಾಡಬಹುದಿತ್ತು. ಬೆಲೆ ಏರಿಕೆ ಯಾರಿಂದ ಆಗಿದೆ ಅನ್ನೋದು ಜನರಿಗೂ ಗೊತ್ತು. ಇಂಥ ಸಮಾರಂಭದಲ್ಲಿ ಹೀಗೆ ಮಾಡುವುದು ಸರಿಯಲ್ಲ ಎಂದರು.

ಕೇಂದ್ರ ತೆಗೆದುಕೊಳ್ಳುವ ನಿರ್ಣಯಕ್ಕೆ ಬದ್ಧ

ಕೇಂದ್ರ ಸರ್ಕಾರ ಭಯೋತ್ಪಾದಕರ ಮೇಲೆ ಕ್ರಮ ಜರುಗಿಸಬೇಕು: ಸಚಿವ ಮುನಿಯಪ್ಪ

● **ಕನ್ನಡಪ್ರಭ ವಾರ್ತೆ** ಬೆಳಗಾವಿ

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಾರತೀಯ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ಮಾಡಿರುವ ಪ್ರಕರಣಕ್ಕೆಸಂಬಂಧಿಸಿದಂತೆಕೇಂದ್ರ ಸರ್ಕಾರತೆಗೆದುಕೊಳ್ಳುವ ನಿರ್ಣಯಕ್ಕೆ ಎಲ್ಲರೂ ಬದ್ಧರಾಗಿದ್ದೇವೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

■ ಇಂತಹ ಘಟನೆ ಆಗಬಾರದು. ಇಂತಹ ಘಟನೆ ಆದಾಗ ಖಂಡಿಸಬೇಕಿತ್ತು. ಇದನ್ನು ಖಂಡಿಸಿರುವ ಕೇಂದ್ರ ಸರ್ಕಾರ ಭಯೋತ್ಪಾದಕರ ಮೇಲೆ ಕ್ರಮ ಜರುಗಿಸಬೇಕು

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ನಮ್ಮ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕೇಂದ್ರ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಸಹ ಕೇಂದ್ರ ಸರ್ಕಾರ ತೆಗೆದುಕೊಳ್ಳುವ ನಿರ್ಧಾರಕ್ಕೆ ಒಮ್ಮತದ ಬೆಂಬಲ ಕೊಡುವುದಾಗಿ ಹೇಳಿದ್ದಾರೆ. ನಮಗೆ ಮೊದಲು ದೇಶ ಮುಖ್ಯ. ಕೇಂದ್ರ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವು ಬದ್ಧರಾಗಿದ್ದೇವೆ. ಪಾಕಿಸ್ತಾನದ ವಿರುದ್ಧ ಪ್ರಚೋದನೆ ಕೊಡುವ ಕೆಲಸ ಮಾಡಿದ್ದು ಖಂಡನೀಯ ಎಂದರು.

ದೇಶದಲ್ಲಿ ಇಂತಹ ಘಟನೆಗಳು ಆಗಬಾರದು. ಇಂತಹ ಘಟನೆಯಾದಾಗ ಖಂಡಿಸಬೇಕಿತ್ತು. ಇದನ್ನು ಖಂಡಿಸಿರುವ ಕೇಂದ್ರ ಸರ್ಕಾರ ಭಯೋತ್ಪಾದಕರ ಮೇಲೆ ಕ್ರಮ ಜರುಗಿಸಬೇಕು ಎಂದ ಅವರು, ಸಿಎಂ ಯುದ್ಧ ಬೇಡ ಎಂಬುದರ ಹೇಳಿಕೆಗೆ ಅವರೇ ನಿನ್ನೆ ಉತ್ತರ ಕೊಟ್ಟಿದ್ದಾರೆ. ಇದರಲ್ಲಿ ರಾಜಕೀಯ ಮಾಡಬಾರದು. ಅದು ಯಾವುದೇ ಪಕ್ಷ ಇರಲಿ ಎಂದರು.

ಕೇಂದ್ರದ ಬೆಲೆ ಏರಿಕೆಯ ವಿರುದ್ಧ ನಾವು ಪ್ರತಿಭಟನೆ ಮಾಡುತ್ತಿದ್ದೇವೆ. ಕೇಂದ್ರ ಸರ್ಕಾರ ಎಲ್ಲದರ ಮೇಲೂ ಬೆಲೆ ಏರಿಕೆ ಮಾಡಿದೆ. ಇದರ ಅವಶ್ಯಕತೆ ಏನಿದೆ? ಇದರ ಹಣ ಎಲ್ಲಿ ಹೋಗುತ್ತಿದೆ ಎಂದು ಕಾರಣ ಕೊಡಬೇಕು. ರಾಷ್ಟ್ರದ ಹಿತದೃಷ್ಟಿಯಿಂದ ಬೆಲೆ ಏರಿಕೆಯನ್ನು ಕೇಂದ್ರ ಸರ್ಕಾರ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಉತ್ತರ ಕರ್ನಾಟಕದ ಪಡಿತರಿಗೆ ಜೋಳ ಕೊಡುವ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ. ಅಕ್ಕಿ ಹೆಚ್ಚು ಉಪಯೋಗಿಸದ ಪ್ರದೇಶದಲ್ಲಿ ಮೂರು ಕೆ.ಜಿ. ಜೋಳಕೊಡುವಪ್ರಸ್ತಾವನೆಯನ್ನುಕೇಂದ್ರಕ್ಕೆಕಳುಹಿಸಲಾಗಿದೆ ಎಂದರು. ರಾಜ್ಯದಲ್ಲಿ ಬಡವರು ಉಪವಾಸ ಇರಬಾರದು ಎಂದು ರಾಜ್ಯ ಸರ್ಕಾರ ನಾನಾ ಯೋಜನೆಯನ್ನು ರೂಪಿಸಿದೆ. ಬಡವರಿಗೆ ದವಸ ಧಾನ್ಯಗಳನ್ನು ನೀಡಬೇಕು ಹಾಗೂ ನರೇಗಾ ಯೋಜನೆಯಲ್ಲಿ ಉದ್ಯೋಗ ಕೊಡಬೇಕು ಎಂಬುದು ನಮ್ಮ ಮುಖ್ಯ ಯೋಜನೆ ಆಗಿದೆ ಎಂದು ಹೇಳಿದರು.

ಮಹಾಲಕ್ಷ್ಮೀ ಅರ್ಬನ್ ಸೊಸೈಟಿಗೆ ₹4.02 ಕೋಟಿ ನಿವ್ವಳ ಲಾಭ

₹106.41. ಕೋಟಿ ಸಾಲ ವಿತರಣೆ, ₹151.54 ಕೋಟಿ ದುಡಿಯುವ ಬಂಡವಾಳ

● **ಕನ್ನಡಪ್ರಭ ವಾರ್ತೆ** ಮೂಡಲಗಿ

ಪಟ್ಟಣದ ಪ್ರತಿಷ್ಠಿತ ಸಹಕಾರಿ ಸಂಘಗಳಲ್ಲಿ ಒಂದಾದ ಮಹಾಲಕ್ಷ್ಮೀ ಅರ್ಬನ ಕೋ-ಆಪ್ ಕ್ರೆಡಿಟ್ ಸೊಸೈಟಿಯು ಕಳೆದ ಮಾರ್ಚ್ ಅಂತ್ಯಕ್ಕೆ ₹4.02 ಕೋಟಿ ನಿವ್ವಳ ಲಾಭ ಹೊಂದಿ ಪ್ರಗತಿ ಪತಥದತ್ತ ಸಾಗಿದೆ ಎಂದು ಸೊಸೈಟಿಯ ಅಧ್ಯಕ್ಷ ಮಲ್ಲಪ್ಪ ಗುರಪ್ಪ ಗಾಣಿಗೇರ ಹೇಳಿದರು.

ಪಟ್ಟಣದ ಶ್ರೀ ಮಹಾಲಕ್ಷ್ಮೀ ಅರ್ಬನ್ ಕೋ-ಆಪ್ ಕ್ರೆಡಿಟ್ ಸೊಸೈಟಿಯ ಸಭಾ ಭವನದಲ್ಲಿ ಸೊಸೈಟಿಯ ಕಚೇರಿಯಲ್ಲಿ ಜರುಗಿದ ಸೊಸೈಟಿಯ ಕಳೆದ ಮಾರ್ಚ್ ಅಂತ್ಯದ ಪ್ರಗತಿಯ ಕುರಿತು ಸಭೆಯಲ್ಲಿ ಮಾತನಾಡಿದ ಅವರು, ಸೊಸೈಟಿಯು ಮಾರ್ಚ್ ಅಂತ್ಯಕ್ಕೆ ₹3.01 ಕೋಟಿ ಶೇರು ಬಂಡವಾಳ, ₹120.67 ಕೋಟಿ ಠೇವುಗಳು, ₹19.80 ಕೋಟಿ ನಿಧಿಗಳನ್ನು, ಹೊಂದಿ ವಿವಿಧ ಬ್ಯಾಂಕುಗಳಲ್ಲಿ ಠೇವಣಿದಾರರ ಭದ್ರತೆಗಾಗಿ ₹33.92 ಕೋಟಿ ಗುಂತಾವಣಿ ಮಾಡಿ, ₹106.41. ಕೋಟಿ ಸಾಲ ವಿತರಿಸಿದ್ದು, ಒಟ್ಟು ದುಡಿಯುವ ಬಂಡವಾಳ ₹151.54 ಕೋಟಿ ಹೊಂದಿದೆ ಎಂದು ತಿಳಿಸಿದರು.

ಸಂಘವು 1992ನೇ ಇಸ್ವಿಯಲ್ಲಿ ಪ್ರಾರಂಭವಾಗಿದ್ದು, 33ನೇ ವರ್ಷಕ್ಕೆ ಪಾದಾರ್ಪಣೆ ಮಾಡಿದೆ. ಕಡಿಮೆ ಬಂಡವಾಳದಲ್ಲಿ ಅತೀ ಹೆಚ್ಚು ಲಾಭ ಗಳಿಸಿದ್ದು, ಹೆಚ್ಚಿನ ಪ್ರಮಾಣದಲ್ಲಿ ಸಾಲ ವಸೂಲಾತಿ ಆಗಿದೆ. ಇದಕ್ಕೆಲ್ಲ ಸಂಘದ ಪ್ರಧಾನ ಕಚೇರಿಯ ಆಡಳಿತ ಮಂಡಳಿ ಸದಸ್ಯರು, ಸರ್ವ ಸಿಬ್ಬಂದಿ ವರ್ಗ ಹಾಗೂ ಶಾಖೆಗಳ ಸಲಹಾ ಸಮಿತಿ ಸದಸ್ಯರ ನಿಸ್ವಾರ್ಥ ಸೇವೆ ಹಾಗೂ ಗ್ರಾಹಕರು ಸರಿಯಾದ ಸಮಯಕ್ಕೆ ಮರುಪಾವತಿ ಮಾಡುತ್ತಿರುವುದರಿಂದ ಪ್ರಮುಖ ಕಾರಣ ವಾಗಿದೆ ಎಂದರು. ಸಭೆಯಲ್ಲಿ ಸೊಸೈಟಿಯ ಉಪಾಧ್ಯಕ್ಷ ಡಾ.ಪ್ರಕಾಶ ಶಿವಪ್ಪ ನಿಡಗುಂದಿ, ನಿರ್ದೇಶಕರಾದ ಮುತ್ತಪ್ಪ ಈರಪ್ಪನವರ, ಶಿವಬಸು ಖಾನಟ್ಟಿ, ಸಂತೋಷ ಪಾರ್ಶಿ,